## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 778
2. ಸದಸ್ಯರ ಹೆಸರು : ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ)
3. ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು
4. ಉತ್ತರಿಸಬೇಕಾದ ದಿನಾಂಕ : 23.07.2024

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಮಂಡ್ಯದ ಹೃದಯ ಭಾಗದಲ್ಲಿರುವ ತೋಟಗಾರಿಕೆ ಇಲಾಖೆಗೆ ಸೇರಿದ ಹಸಿರು ಜಾಗವನ್ನು ನ್ಯಾಯಾಲಯ ನಿರ್ಮಾಣ ಮಾಡಲು ಮಂಜೂರು ಮಾಡಿಕೊಡಬೇಕೆನ್ನುವ ನ್ಯಾಯಾಂಗ ಇಲಾಖೆಯ ಬೇಡಿಕೆ ಸರ್ಕಾರದ ಗಮನಕ್ಕೆ ಬಂದಿದೆಯೇ: | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ | ಬಂದಿದ್ದಲ್ಲಿ, ಸರ್ಕಾರ ತೋಟಗಾರಿಕೆ ಇಲಾಖೆಗೆ ಸೇರಿದ ಹಸಿರುವ ಜಾಗವನ್ನು ನ್ಯಾಯಾಂಗ ಇಲಾಖೆಗೆ ಮಂಜೂರು ಮಾಡಿಕೊಟ್ಟಿದೆಯೇ ಅಥವಾ ಇಲ್ಲವೇ: ಈ ಕುರಿತು ಸರ್ಕಾರದ ನಿಲುವೇನು: (ಸಂಪೂರ್ಣ ಮಾಹಿತಿ ನೀಡುವುದು) | ತೋಟಗಾರಿಕೆ ಇಲಾಖೆಗೆ ಸೇರಿದ ಹಸಿರು ಜಾಗವನ್ನು ನ್ಯಾಯಾಂಗ ಇಲಾಖೆಗೆ ಮಂಜೂರು ಮಾಡಿರುವುದನ್ನು ರದ್ದುಪಡಿಸಲಾಗಿದೆ. ಸದರಿ ಜಾಗವನ್ನು ತೋಟಗಾರಿಕೆ ಇಲಾಖೆಯಲ್ಲಿಯೇ ಮುಂದುವರಿಸುವುದು ಸರ್ಕಾರದ ನಿಲುವಾಗಿದ್ದು, ಈ ಕುರಿತು ದಿನಾಂಕ:01-02-2024 ರಂದು ಸರ್ಕಾರದ ಆದೇಶ ಹೊರಡಿಸಲಾಗಿದೆ. |
| ಇ | ಭೂಮಿ ಮಂಜೂರು ಮಾಡಿಕೊಟ್ಟಿದ್ದಲ್ಲಿ ಎಷ್ಟು ಎಕರೆ ವಿಸ್ತೀರ್ಣವನ್ನು ಮಂಜೂರು ಮಾಡಲಾಗಿದೆ: (ವಿವರ ನೀಡುವುದು) | |
| ಈ | ಹಸಿರು ಭೂಮಿಯನ್ನು ಅನ್ಯ ಉದ್ದೇಶಗಳಿಗೆ ಮಂಜೂರು ಮಾಡುವ ಮುನ್ನ ಅನುಸರಿಸಬೇಕಾದ ನಿಯಮಗಳೇನು? | ತೋಟಗಾರಿಕೆ ಇಲಾಖೆಯ ಜಮೀನನ್ನು ಅನ್ಯ ಉದ್ದೇಶಗಳಿಗೆ ಮಂಜೂರು ಮಾಡುವ ಮುನ್ನ ಪ್ರಸ್ತಾವನೆಗೆ ಕರ್ನಾಟಕ ರಾಜ್ಯ ತೋಟಗಾರಿಕೆ ಅಭಿವೃದ್ಧಿ ಏಜೆನ್ಸಿಯ ಒಪ್ಪಿಗೆ ಪಡೆಯಬೇಕಾದ ಕಡ್ಡಾಯ ನಿಯಮವಿರುತ್ತದೆ. |

HORTI 329 HGM 2024

S. S. Mallikarjun

**(ಎಸ್.ಎಸ್.ಮಲ್ಲಿಕಾರ್ಜುನ್)**
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು